ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಮಂಡ್ಯದ (ಕೆರೆಅಂಗಳದ) ವಿವೇಕಾನಂದ ನಗರ ಬಡಾವಣೆಯ ಅಭಿವೃದ್ಧಿ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

226 (183) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ನಗರದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅಭಿವೃದ್ಧಿ ಪಡಿಸಿರುವ (ಮಂಡ್ಯ ಕೆರೆ ಅಂಗಳದ) ವಿವೇಕಾನಂದನಗರ ಬಡಾವಣೆಯನ್ನು ಯಾವಾಗ ಅಭಿವೃದ್ಧಿ ಪಡಿಸಲಾಗಿದೆ ;

(ಆ) ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಈ ನಿವೇಶನಗಳಿಗೆ ಸರಿಯಾದ ಮೂಲ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣವೇನು ;

(ಈ) ಈ ಬಡಾವಣೆಯ ಬಗ್ಗೆ ಸಿ.ಬಿ.ಐ. ತನಿಖೆ ನಡೆದಿದ್ದು-ಸದರಿ ತನಿಖಾ ವರದಿ ಸರ್ಕಾರಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಸದರಿ ಬಡಾವಣೆಯ ಸಮಸ್ಯೆಯನ್ನು ಬಗೆಹರಿಸಿ ಮೂಲ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)